All India Radio: Bangalore
Regional Bulletin In Kannada
25.03.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದಲ್ಲಿ ೧೫ ಸಾವಿರದ ೫೬೮ ಕೋಟಿ ರೂಪಾಯಿ ಅವ್ಯವಹಾರ ; ಬಿಜೆಪಿ ಗಂಭೀರ ಆರೋಪ
- ದೂರವಾಣಿ ಕದ್ದಾಲಿಕೆ ಬಗ್ಗೆ ಯಾರೂ ದೂರು ನೀಡಿಲ್ಲ - ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟನೆ
- ಮೈಸೂರು ಸೇರಿದಂತೆ ರಾಜ್ಯದ ೫ ಮಹಾನಗರ ಪಾಲಿಕೆಗೆ ಈ ವರ್ಷ ಚುನಾವಣೆ ನಡೆಸಲು ಚುನಾವಣಾ ಆಯೋಗ ನಿರ್ಧಾರ
- ಹಾಸನ ಜಿಲ್ಲೆಯಲ್ಲಿ ಆತಂಕ ಸೃಷ್ಟಿಸಿದ್ದ ಕಾಡಾನೆ ಸೆರೆ ಹಿಡಿಯುವಲ್ಲಿ ಅರಣ್ಯ ಇಲಾಖೆ ಯಶಸ್ವಿ ; ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದನೆಕೇಂದ್ರ ಸರ್ಕಾರದ ನೂತನ ಹಣಕಾಸು ಕಾರ್ಯದರ್ಶಿಯಾಗಿ ರಾಜ್ಯವರ್ಗದ ಐಐಎಸ್ ಅಧಿಕಾರಿ ಅಜಯ್ ಸೇಠ್ ನೇಮಕ

<><><><>

ಬೆಸ್ಕಾಂ ಮತ್ತು ಎಸ್ಕಾಂಗಳ ಸ್ಮಾರ್ಟ್ ಮೀಟರ್ ಟೆಂಡರ್‌ನಲ್ಲಿ ಸುಮಾರು ೧೫ ಸಾವಿರದ ೫೬೮ ಕೋಟಿ ರೂಪಾಯಿಯ ಅವ್ಯವಹಾರ ನಡೆದಿದೆ ಎಂದು ಶಾಸಕ ಡಾ.ಸಿ.ಎನ್. ಅಶ್ವತ್ಥನಾರಾಯಣ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಅವ್ಯವಹಾರದ ಗಾತ್ರ ಇನ್ನೂ ದೊಡ್ಡದೇ ಇದೆ ಎಂದು ಹೇಳಿದರು. ಎಸ್ಕಾಂಗಳು ಕೆಇಆರ್‌ಸಿ ನಿಯಮಗಳಿಗೆ ಬದ್ಧವಾಗಿರಬೇಕು. ಈ ನಿಯಮಗಳಲ್ಲಿ ಸ್ಮಾರ್ಟ್ ಮೀಟರ್ ಕಡ್ಡಾಯ ಎಂದು ಎಲ್ಲೂ ಹೇಳಿಲ್ಲ. ತಾತ್ಕಾಲಿಕ ಸಂಪರ್ಕಕ್ಕೆ ಮಾತ್ರ ಸ್ಮಾರ್ಟ್ ಮೀಟರ್ ಕಡ್ಡಾಯ ಮಾಡಬಹುದೇ ಹೊರತು ಖಾಯಂ ಗ್ರಾಹಕರು, ಹೊಸ ಗ್ರಾಹಕರಿಗೆ ಈ ಸ್ಮಾರ್ಟ್ ಮೀಟರನ್ನು ಕಡ್ಡಾಯ ಮಾಡುವಂತಿಲ್ಲ ಎಂದು ತಿಳಿಸಿದರು. ಇದೊಂದು ದೊಡ್ಡ ಹಗರಣವಾಗಿದ್ದು, ಸರ್ಕಾರ ಇದಕ್ಕೆ ಉತ್ತರ ಕೊಡಬೇಕು

ಎಂದು ಆಗ್ರಹಿಸಿದ್ದಾರೆ. ಮುಂದಿನ ದಿನಗಳಲ್ಲಿ ಸ್ಮಾರ್ಟ್ ಮೀಟರ್ ವಿರುದ್ಧ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ದೂರವಾಣಿ ಕದ್ದಾಲಿಕೆ ಬಗ್ಗೆ ಯಾರೂ ದೂರು ನೀಡಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಪಕ್ಷ ನಾಯಕ ಅಶೋಕ ಈ ಕುರಿತಂತೆ ಆರೋಪ ಮಾಡಿದ್ದು, ಈವರೆಗೆ ದೂರು ನೀಡಿಲ್ಲ ಎಂದು ತಿಳಿಸಿದ್ದಾರೆ. ಅಶೋಕ ಅವರು ನಿರ್ಧಿಷ್ಟವಾಗಿ ದೂರು ಸಲ್ಲಿಸಿದರೆ ತನಿಖೆ ನಡೆಬಹುದು ಎಂದು ತಿಳಿಸಿದ್ದಾರೆ. ಇದೇ ವೇಳೆ ರನ್ಯಾರಾವ್ ಪ್ರಕರಣದಲ್ಲಿ ಕಂದಾಯ ಗುಪ್ತಚರ ಇಲಾಖೆಯ ಅಧಿಕಾರಿಗಳು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ದೂರು ನೀಡಿರಬಹುದು ಎಂದು ಹೇಳಿದ್ದಾರೆ.

<><><><>

ಮೈಸೂರು ಸೇರಿದಂತೆ ರಾಜ್ಯದ ಐದು ಮಹಾ ನಗರ ಪಾಲಿಕೆಗೆ ಈ ವರ್ಷ ಚುನಾವಣೆ ನಡೆಸಲು ನಿರ್ಧರಿಸಲಾಗಿದೆ ಎಂದು ರಾಜ್ಯ ಚುನಾವಣಾ ಆಯೋಗದ ಆಯುಕ್ತ ಜಿ.ಎಸ್. ಸಂಗ್ರೇಶಿ ತಿಳಿಸಿದ್ದಾರೆ. ಮೈಸೂರಿನಲ್ಲಿ ನಿನ್ನೆ ಮಾತನಾಡಿದ ಅವರು, ಮತದಾರರ ಪಟ್ಟಿ ಸಿದ್ಧವಾಗಿದ್ದು, ಮೈಸೂರು, ಶಿವಮೊಗ್ಗ, ದಾವಣಗೆರೆ, ತುಮಕೂರು, ಮಂಗಳೂರು ಮಹಾನಗರ ಪಾಲಿಕೆಗೆ ಚುನಾವಣೆ ನಡೆಸಲು ಆಯೋಗ ಸಿದ್ಧವಾಗಿದೆ," ಎಂದು ಹೇಳಿದ್ದಾರೆ. "ಸರ್ಕಾರ ಮೀಸಲಾತಿ ಪಟ್ಟಿ ನೀಡದೆ ಇದ್ದರೆ ಹೈಕೋರ್ಟ್ ಮೊರೆ ಹೋಗಿ ಹಳೆ ಮೀಸಲು ಪಟ್ಟಿಯಂತೆ ಚುನಾವಣೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಈ ಕುರಿತಂತೆ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಅವರು ಹೇಳಿದ್ದಾರೆ.

<><><><>

ಹಾಸನ ಜಿಲ್ಲೆಯ ಅರಣ್ಯದಂಚಿನ ಗ್ರಾಮಗಳ ಜನರಿಗೆ ಆತಂಕ ಸೃಷ್ಟಿಸಿದ್ದ ಎರಡು ಕಾಡಾನೆಗಳನ್ನು ಸೆರೆಹಿಡಿದು ಬೇರೆಡೆಗೆ ಸ್ಥಳಾಂತರಿಸುವಲ್ಲಿ ಅರಣ್ಯ ಇಲಾಖೆ ಯಶಸ್ವಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಹಗಲಿರುಳೆನ್ನದೆ ಶ್ರಮಿಸಿದ ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಇತರೆ ಎಲ್ಲಾ ಸಿಬ್ಬಂದಿಗೆ ಅಭಿನಂದನೆ ಸಲ್ಲಿಸಿದ್ದಾರೆ. ವನ್ಯಜೀವಿ ಮಾನವ ಸಂಘರ್ಷದ ಪ್ರಮಾಣವನ್ನು ತಗ್ಗಿಸುವ

ನಿಟ್ಟಿನಲ್ಲಿ ಸರ್ಕಾರ ನಿರಂತರ ಕೆಲಸ ಮಾಡುತ್ತಿದೆ. ಆನೆಗಳ ಸಂಖ್ಯೆ ಹೆಚ್ಚಿರುವ ಜಿಲ್ಲೆಗಳಲ್ಲಿ ರೈಲ್ವೆ ಹಳಿಗಳ ಸಮೀಪ ಬೇಲಿ ಹಾಕುವುದು, ಕಾಡುಪ್ರಾಣಿಗಳಿಗೆ ಅರಣ್ಯದಲ್ಲೇ ಮೇವು, ನೀರು ಒದಗಿಸುವತ್ತ ಅರಣ್ಯ ಇಲಾಖೆ ಆದ್ಯತೆ ನೀಡಿದೆ ಎಂದು ತಿಳಿಸಿದ್ದಾರೆ.

<><><>

ಕೋಲಾರ ತಾಲೂಕಿನ ಅಬ್ಬಣಿ ಕಿರು ಅರಣ್ಯ ಪ್ರದೇಶದಲ್ಲಿ ಅರಣ್ಯ ಇಲಾಖೆ ಒತ್ತುವರಿ ತೆರವು ಕಾರ್ಯಾಚರಣೆ  ನಡೆಸುತ್ತಿದೆ. ಜೆಸಿಬಿಗಳ ಮೂಲಕ ಸುಮಾರು ೧೮೦ಕ್ಕೂ ಅಧಿಕ ಎಕರೆ ಅರಣ್ಯ ಪ್ರದೇಶ ಒತ್ತುವರಿ  ತೆರವು  ಕಾರ್ಯಾಚರಣೆ ನಡೆಯುತ್ತಿದ್ದು, ರೈತರ ಪಾಲಿಹೌಸ್ ಸೇರಿದಂತೆ ವಿವಿಧ ಬೆಳೆಗಳನ್ನು ತೆರವುಗೊಳಿಸಲಾಗುತ್ತಿದೆ. ಭೂ ಮಾಲೀಕರ ವಿರೋಧದ ನಡುವೆಯೂ ಒತ್ತುವರಿ ತೆರವು ಕಾರ್ಯ ಮುಂದುವರೆದಿದೆ. ಕೋಲಾರ ಗ್ರಾಮಾಂತರ ಠಾಣೆ ಪೊಲೀಸರು ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಿದ್ದಾರೆ.

<><><>

ಕೇಂದ್ರ ಸರ್ಕಾರದ ನೂತನ ಹಣಕಾಸು ಕಾರ್ಯದರ್ಶಿಯಾಗಿ, ಕರ್ನಾಟಕ ವರ್ಗದ ೧೯೮೭ ರ ಸಾಲಿನ ಐಎಎಸ್ ಅಧಿಕಾರಿ ಅಜಯ್ ಸೇಠ್ ಅವರನ್ನು ನೇಮಿಸಲಾಗಿದೆ. ಪ್ರಸ್ತುತ ಇವರು ಹಣಕಾಸು ಸಚಿವಾಲಯದ ಆರ್ಥಿಕ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿಯಾಗಿದ್ದಾರೆ. ಸಿಬ್ಬಂದಿ ಸಚಿವಾಲಯ ಹೊರಡಿಸಿದ ಅಧಿಕೃತ ಆದೇಶದಲ್ಲಿ ಅಜಯ್ ಸೇಠ್ ಅವರನ್ನು ಹಣಕಾಸು ಕಾರ್ಯದರ್ಶಿಯಾಗಿ ನೇಮಿಸಲು ಸಂಪುಟದ ನೇಮಕಾತಿ ಸಮಿತಿ ಅನುಮೋದನೆ ನೀಡಿದೆ. ೨೦೨೧ ರಲ್ಲಿ ಅಜಯ್ ಸೇಠ್ ಕೇಂದ್ರ ಸೇವೆಗೆ ನಿಯೋಜನೆಗೊಂಡಿದ್ದರು. ಇದಕ್ಕೂ ಮೊದಲು ಅವರು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದರು.

<><><>

ಮಾಯಕೊಂಡ ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ ಎಂದು ಕ್ಷೇತ್ರದ ಶಾಸಕ ಕೆ.ಎಸ್.ಬಸವಂತಪ್ಪ ತಿಳಿಸಿದ್ದಾರೆ. ತೋಳಹುಣಸೆ ಗ್ರಾಮದಲ್ಲಿ ೧೬ ಕೋಟಿ ೩೭ ಲಕ್ಷ ರೂಪಾಯಿ ವೆಚ್ಚದ ಬಹುಗ್ರಾಮ ಕುಡಿಯುವ ನೀರು ಯೋಜನೆಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಕ್ಷೇತ್ರ ವ್ಯಾಪ್ತಿಯಲ್ಲಿ ಉತ್ತಮ ರಸ್ತೆ, ಕುಡಿಯುವ ನೀರು ಮತ್ತು ಕೆರೆ ತುಂಬಿಸುವ ಯೋಜನೆಗಳಿಗೆ ಅನುದಾನ ದೊರೆಯುವ ನಿರೀಕ್ಷೆ ಇದೆ ಎಂದು ಹೇಳಿದ್ದಾರೆ. ಬೇಸಿಗೆ ಮುಗಿಯುವವರೆಗೂ

ಕ್ಷೇತ್ರಾದ್ಯಂತ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಕೆಲಸ ಮಾಡಬೇಕೆಂದು ಸೂಚಿಸಿದ್ದಾರೆ.

<><><>

ಚಿಕ್ಕಮಗಳೂರು ನಗರದ ಅಜಾದ್ ಪಾರ್ಕ್ ವೃತದಲ್ಲಿ ಬಿ.ಜೆ.ಪಿ ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರ ಹಾಗೂ ಡಿ.ಕೆ ಶಿವಕುಮಾರ್ ವಿರುದ್ಧ ಘೋಷಣೆಗಳನ್ನು ಕೂಗಿದರು. ಬಳ್ಳಾರಿಯಲ್ಲೂ ಬಿಜೆಪಿ ಪ್ರತಿಭಟನೆ ನಡೆಸಿತು. ಅಂಬೇಡ್ಕರ್ ಸರ್ಕಲ್ ನಲ್ಲಿ ವಿಧಾನಪರಿಷತ್ ಸದಸ್ಯ ವೈ.ಎಂ.ಸತೀಶ್, ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಧರ್ಮಾಧಾರಿತ ಮೀಸಲಾತಿಗೆ ನಾವು ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

<><><>

ಕ್ಷಯರೋಗ ಪತ್ತೆ ಮತ್ತು ಚಿಕಿತ್ಸೆಯ ೧೦೦ ದಿನಗಳ ಆಂದೋಲನದಲ್ಲಿ ಯಾದಗಿರಿ ಜಿಲ್ಲೆಯು ರಾಜ್ಯಕ್ಕೆ ೨ನೇ ಸ್ಥಾನ ಪಡೆದಿರುವುದು ಹೆಮ್ಮೆಯ ವಿಚಾರವಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ತಿಳಿಸಿದ್ದಾರೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ನಡೆದ ವಿಶ್ವ ಕ್ಷಯರೋಗ ದಿನಾಚರಣೆಯಲ್ಲಿ ಮಾತನಾಡಿದ ಅವರು, ೨೦೨೪ರ ಡಿಸೆಂಬರ್ ೭ರಿಂದ ೨೦೨೫ರ ಮಾರ್ಚ್ ೨೪ರ ವರೆಗೆ ನಡೆದ ಕಾರ್ಯಕ್ರಮದಲ್ಲಿ ಜಿಲ್ಲೆ ಈ ಸಾಧನೆ ಮಾಡಿದೆ ಎಂದು ಹೇಳಿದ್ದಾರೆ.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಹಾಡೋನಹಳ್ಳಿಯ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದಲ್ಲಿ ಇಂದು 'ಸಸ್ಯ ತಳಿಗಳ ಸಂರಕ್ಷಣೆ ಮತ್ತು ರೈತರ ಹಕ್ಕುಗಳ ಕಾಯ್ದೆ'ಯ ತರಬೇತಿ ಮತ್ತು ವಸ್ತುಪ್ರದರ್ಶನ ಏರ್ಪಡಿಸಲಾಗಿತ್ತು. ವಸ್ತುಪ್ರದರ್ಶನದಲ್ಲಿ ವಿವಿಧ ಜಿಲ್ಲೆಗಳ ರೈತರು ತಂದಿದ್ದ ಹಣ್ಣುಗಳ ತಳಿಗಳು, ಬೀಜಗಳು, ವೈವಿಧ್ಯತೆಯ ಸ್ಥಳೀಯ ಸೊಪ್ಪು ಹಾಗೂ ತರಕಾರಿಗಳು, ಸಿರಿಧಾನ್ಯಗಳ ತಳಿಗಳನ್ನು ಪ್ರದರ್ಶನಕ್ಕಿಡಲಾಗಿತ್ತು. ಕೃಷಿ ವಿಶ್ವವಿದ್ಯಾನಿಲಯದ ನಿವೃತ್ತ ಪ್ರಾಧ್ಯಾಪಕ ಡಾ. ನಿರಂಜನ ಮೂರ್ತಿ ಮೇಳವನ್ನು ಉದ್ಘಾಟಿಸಿ ಮಾತನಾಡಿ, ನಮ್ಮಲ್ಲಿರುವ ಸಸ್ಯ ತಳಿಗಳನ್ನು ಅದರಲ್ಲೂ ವಿಶೇಷವಾಗಿ ರೈತರು ಸಂರಕ್ಷಿಸಿದ ಸಸ್ಯತಳಿಗಳನ್ನು ರಕ್ಷಣೆ ಮಾಡಬೇಕು ಎಂದು ಕರೆ ನೀಡಿದರು.

<><><>

ಸಂಕ್ಷಿಪ್ತ ಸುದ್ದಿಗಳು

- ಯಾದಗಿರಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ, ಪ್ರವಾಸೋದ್ಯಮ ಇಲಾಖೆ ಸಹಯೋಗದೊಂದಿಗೆ ಯಾದಗಿರಿ ನಗರದಲ್ಲಿರುವ ಲುಂಬಿನಿ ಉದ್ಯಾನವನದ ಸಣ್ಣ ಕೆರೆಯಲ್ಲಿ ಬೋಟಿಂಗ್‌ಗೆ ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಚಾಲನೆ ನೀಡಿದರು.
- ಕೋಲಾರ ನಗರ ಹೊರವಲಯದ ಹೊನ್ನೇನಹಳ್ಳಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ-ಯುವತಿಯರಿಗಾಗಿ ಉಚಿತ ಹಲವು ಸ್ವಯಂ ಉದ್ಯೋಗಧಾರಿತ ತರಬೇತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ತರಬೇತುದಾರರ ಮೊಬೈಲ್ ಸಂಖ್ಯೆ ೮೯೭೧೩೦೮೭೭೬ಗೆ ಸಂಪರ್ಕಿಸಬಹುದಾಗಿದೆ.
- ಚಿಕ್ಕಬಳ್ಳಾಪುರ ನಗರಸಭೆಯ ೨೦೨೫-೨೬ನೇ ಸಾಲಿನ ಆಯವ್ಯಯ ನಾಳೆ ನಗರಸಭೆ ಅಧ್ಯಕ್ಷ ಎ.ಗಜೇಂದ್ರ ಅಧ್ಯಕ್ಷತೆಯಲ್ಲಿ ಮಂಡನೆಯಾಗಲಿದೆ ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
- ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಹಾಗೂ ಕೇಂದ್ರ ಸರ್ಕಾರದ ವಾಣಿಜ್ಯೋದ್ಯಮ ಅಭಿವೃದ್ಧಿ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಮೂರು ತಿಂಗಳ ಉಚಿತ ಕೌಶಲ್ಯ ತರಬೇತಿ ಪಡೆದ ಮಹಿಳೆಯರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರಮಾಣಪತ್ರ ನೀಡಲಾಯಿತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>